# ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸೇಡಂ.

ಸಿ.ಸಿ. ನಂಃ 463/2018 ಸಿಡಬ್ಲ್ಯೂ : 9 ಪಿಡಬ್ಲ್ಯೂಃ 6

ಪ್ರಮಾಣವಚನ ಬೋಧಿಸಲಾಯಿತು ದಿಃ 20-02-2026

ಹೆಸರು : ಅನಿಲ್ ಕುಮಾರ್

ತಂದೆ ಹೆಸರು : ರತ್ನಯ್ಯ

ವಯಸ್ಸು : 53 ವರ್ಷ

ಉದ್ಯೋಗ : ಎ ಎಸ್ ಐ ಸ್ಟೇಷನ್ ಬಜಾರ್ ಪಿ ಎಸ್

ವಾಸಸ್ಥಳ : ಕಲಬುರಗಿ

**: ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ :**

ನಾನು 2015 ರಿಂದ 2019 ವರೆಗೆ ಸೇಡಂ ಪೋಲಿಸ್ ಠಾಣೆಯಲ್ಲಿ ಮುಖ್ಯ ಪೇದೆ ಎಂದು ಕರ್ತವ್ಯ ನಿರ್ವಹಿಸಿರುತ್ತೇನೆ.

ನಾನು ದಿಃ06-04-2018 ರಂದು ಮಧ್ಯಾಹ್ನ 02-00 ಗಂಟೆಯಿಂದ ನಾನು ಠಾಣಾ ಪ್ರಭಾರದಲ್ಲಿದ್ದಾಗ ಚಾಸಾಃ 1 ರವರು ಠಾಣೆಗೆ ಹಾಜರಾಗಿ ಮು ಮಾ ಮತ್ತು ಜಪ್ತಿ ಪಂಚನಾಮೆ ಹಾಗೂ ಇಬ್ಬರೂ ಆರೋಪಿತರನ್ನು ಠಾಣೆಗೆ ತಂದು ಹಾಜರು ಪಡಿಸಿದ ಮೇರೆಗೆ ಪಂಚನಾಮೆ ಆಧಾರದ ಮೇಲೆ ನಮ್ಮ ಠಾಣೆಯ ಗುನ್ನೆ ನಂಬರ107/2018 ನ್ನು ದಾಖಲಿಸಿಕೊಂಡು ಪ್ರ.ವ. ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ಕಳುಹಿಸಿಕೊಟ್ಟೆನು. ಸದರಿ ದೂರನ್ನು ಈಗ ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ- 1 ಎಂದು ಗುರುತಿಸಲಾಗಿದೆ. ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ- 1 (ಬಿ) ಎಂದು ಗುರುತಿಸಲಾಯಿತು. ಪ್ರ.ವ. ವರದಿಯನ್ನು ಈಗ ನೋಡುತ್ತಿದ್ದು ಅದನ್ನು ನಿಪಿ-3 ಎಂದು ಸಾಕ್ಷಿಯ ಸಹಿಯನ್ನು ನಿಪಿ- 3(ಎ) ಎಂದು ಗುರುತಿಸಲಾಯಿತು. ನಂತರ ಚಾ ಸಾ 4 ರಿಂದ 7 ರವರ ಹೇಳಿಕೆಯನ್ನು ದಾಖಲಿಸಿಕೊಂಡಿರುತ್ತೇನೆ. ನಂತರ ಒಟ್ಟು 25 ಸೇಂದಿ ಪಾಕೇಟುಗಳಲ್ಲಿ 1ಲೀ ಸೇಂದಿಯನ್ನು ರಾಸಾಯನಿಕ ವಿಶ್ಲೇಷಣ ಕುರಿತು ಕಳುಹಿಸಿರುತ್ತೇನೆ. ಹಾಗೂ ಇನ್ನುಳಿದ 24 ಸೇಂದಿ ಪಾಕೇಟುಗಳನ್ನು ಅಬಕಾರಿ ಇಲಾಖೆಗೆ ಒಪ್ಪಿ ಸಿರುತ್ತೇನೆ. ನಂತರ ಸದರಿ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾ ಸಾ 10 ರವರಿಗೆ ವಹಿಸಿಕೊಟ್ಟಿರುತ್ತೇನೆ.

**ಪಾಟೀಸವಾಲುಃ** ಆರೋಪಿ ಪರ ವಕೀಲರಿಂದ ಃ

ನಾನು ದಿಃ06-04-2018 ರಂದು ಮಧ್ಯಾಹ್ನ 02-00 ಗಂಟೆಯಿಂದ ನಾನು ಠಾಣಾ ಪ್ರಭಾರದಲ್ಲಿದ್ದಾಗ ಚಾಸಾಃ 1 ರವರು ಠಾಣೆಗೆ ಹಾಜರಾಗಿ ಮು ಮಾ ಮತ್ತು ಜಪ್ತಿ ಪಂಚನಾಮೆ ಹಾಗೂ ಇಬ್ಬರೂ ಆರೋಪಿತರನ್ನು ಠಾಣೆಗೆ ತಂದು ಹಾಜರು ಪಡಿಸಿದ ಮೇರೆಗೆ ಪಂಚನಾಮೆ ಆಧಾರದ ಮೇಲೆ ನಮ್ಮ ಠಾಣೆಯ ಗುನ್ನೆ ನಂಬರ107/2018 ನ್ನು ದಾಖಲಿಸಿಕೊಂಡು ಪ್ರ.ವ. ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ಕಳುಹಿಸಿಕೊಟ್ಟೆನು ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಿಲ್ಲ. ನಂತರ ಚಾ ಸಾ 4 ರಿಂದ 7 ರವರ ಹೇಳಿಕೆಯನ್ನು ದಾಖಲಿಸಿಕೊಂಡಿರುತ್ತೇನೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಿಲ್ಲ. ನಂತರ ಒಟ್ಟು 25 ಸೇಂದಿ ಪಾಕೇಟುಗಳಲ್ಲಿ 1ಲೀ ಸೇಂದಿಯನ್ನು ರಾಸಾಯನಿಕ ವಿಶ್ಲೇಷಣ ಕುರಿತು ಕಳುಹಿಸಿರುತ್ತೇನೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಿಲ್ಲ. ಹಾಗೂ ಇನ್ನುಳಿದ 24 ಸೇಂದಿ ಪಾಕೇಟುಗಳನ್ನು ಅಬಕಾರಿ ಇಲಾಖೆಗೆ ಒಪ್ಪಿಸಿರುತ್ತೇನೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಿಲ್ಲ. ನಂತರ ಸದರಿ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾ ಸಾ 10 ರವರಿಗೆ ವಹಿಸಿಕೊಟ್ಟಿರುತ್ತೇನೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಿಲ್ಲ. ಆರೋಪಿಗೂ ಮು ಮಾ ಯಾವುದೇ ಸಂಬಂದ ಇಲ್ಲ ಎಂದರೆ ಸರಿಯಿಲ್ಲ.

ಮರುವಿಚಾರಣೆಃ ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

ಓ. ಹೇ. ಕೇ. ಸರಿ. ಇದೆ.

ಪ್ರ. ದ. ನ್ಯಾ ದಂ.

ಸೇಡಂ.